# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಅದರ ವ್ಯಾಪ್ತಿಯಲ್ಲಿನ ಕಾನೂನು ಸೇವೆಗಳ ಸಮಿತಿಗಳಿಗೆ ಕಾನೂನು ನೆರವು ಕೋರಿ ಬರುವ ಪ್ರಕರಣಗಳಿಗೆ ಲಿಖಿತ ಅಭಿಪ್ರಾಯ ನೀಡುವ ವಕೀಲರುಗಳ ಸಂಭಾವನೆಯನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:**
1.ಸರ್ಕಾರದ ಆದೇಶ ಸಂಖ್ಯೆ: ಲಾ-ಎಲ್ಎಡಿ/64/2014, ದಿನಾಂಕ: 21.07.2015.
2. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಪತ್ರ ಸಂಖ್ಯೆ: 48/ಎಡಿಎಂ/2014, ದಿನಾಂಕ: 22.06.2019
3.ಸರ್ಕಾರದ ಪತ್ರ ಸಂಖ್ಯೆ. ಲಾ-ಎಲ್ಎಡಿ/29/2019, ದಿನಾಂಕ: 29.08.2020.
4. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಪತ್ರ ಸಂಖ್ಯೆ: 48/ಎಡಿಎಂ/2014, ದಿನಾಂಕ: 07.04.2021.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ: (1)ರ ದಿನಾಂಕ: 21.07.2015ರ ಸರ್ಕಾರಿ ಆದೇಶದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು, ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿಗಳು ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಗಳಿಗೆ ಕಾನೂನು ನೆರವು ಕೋರಿ ಬರುವ ಪ್ರಕರಣಗಳಿಗೆ ಲಿಖಿತ ಅಭಿಪ್ರಾಯ ನೀಡಲು ವಕೀಲರುಗಳಿಗೆ ನೀಡುತ್ತಿದ್ದ ಸಂಭಾವನೆಯನ್ನು ರೂ. 50/-ರಿಂದ ರೂ. 500/-ಗಳಿಗೆ ಮತ್ತು ಬೆರಳಚ್ಚು ವೆಚ್ಚ ರೂ. 100/- ಸೇರಿದಂತೆ ರೂ. 600/-ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ದಿನಾಂಕ: 22.06.2019ರ ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರು ದಿನಾಂಕ: 20.02.2019ರಂದು ನಡೆದ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ 39ನೇ ಸರ್ವ ಸದಸ್ಯರ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳನ್ನು ಉಲ್ಲೇಖಿಸುತ್ತಾ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಅದರ ವ್ಯಾಪ್ತಿಯಲ್ಲಿ ಬರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು, ಉಚ್ಚ ನ್ಯಾಯಾಲಯ ಕಾನೂನು ಸೇವಾ ಸಮಿತಿಗಳು ಮತ್ತು ತಾಲ್ಲೂಕು ಕಾನೂನು ಸೇವಾ ಸಮಿತಿಗಳಿಗೆ ಕಾನೂನು ನೆರವು ಕೋರಿ ಬರುವ ಪ್ರಕರಣಗಳಿಗೆ ಲಿಖಿತ ಅಭಿಪ್ರಾಯ ನೀಡಲು ವಕೀಲರುಗಳಿಗೆ ನೀಡುವ ಗೌರವಧನವನ್ನು ರೂ. 600/-ಗಳಿಂದ ರೂ. 1,000/-ಗಳಿಗೆ ಹೆಚ್ಚಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3)ರ ದಿನಾಂಕ: 29.08.2020ರ ಸರ್ಕಾರದ ಪತ್ರದಲ್ಲಿ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಅದರ ವ್ಯಾಪ್ತಿಯಲ್ಲಿನ ಪ್ರಾಧಿಕಾರಗಳು ಮತ್ತು ಸಮಿತಿಗಳಿಗೆ ಲಿಖಿತ ಅಭಿಪ್ರಾಯ ನೀಡಲು ನೆರವು ಕೋರಿ ಬರುವ ಪ್ರಕರಣಗಳಿಗೆ ಪ್ರಸ್ತುತ ವಕೀಲರುಗಳಿಗೆ ನೀಡುತ್ತಿರುವ ರೂ.600/-ಗಳ ಸಂಭಾವನೆಯನ್ನು ರೂ.1,000/-ಗಳಿಗೆ ಹೆಚ್ಚಿಸುವುದಕ್ಕೆ ಸಂಬಂಧಿಸಿದಂತೆ ಆರ್ಥಿಕ ನಿರ್ಬಂಧಗಳ ಹಿನ್ನೆಲೆಯಲ್ಲಿ ಮುಂದಿನ ವರ್ಷದಲ್ಲಿ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರಿಗೆ ತಿಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (4)ರ ದಿನಾಂಕ: 07.04.2021 ಪತ್ರದಲ್ಲಿ ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರು ರಾಜ್ಯದ ಜನಸಾಮಾನ್ಯರು ಉಚಿತ ಕಾನೂನು ಸೇವೆಗಳನ್ನು ಪಡೆಯಲು ನೆರವು ಕೋರಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಅದರ ವ್ಯಾಪ್ತಿಯಲ್ಲಿನ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ ಹಾಗೂ ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳಿಗೆ ಸಲ್ಲಿಸಿದಂತಹ ಪ್ರಕರಣಗಳಿಗೆ ಲಿಖಿತ ಅಭಿಪ್ರಾಯ ನೀಡಲು ವಕೀಲರುಗಳಿಗೆ ರೂ.600/-ಗಳ ಸಂಭಾವನೆಯನ್ನು ಪಾವತಿಸಲಾಗುತ್ತಿದ್ದು, ಸದರಿ ಮೊತ್ತವನ್ನು 2014ನೇ ವರ್ಷದಲ್ಲಿ ನಿಗದಿಪಡಿಸಲಾಗಿರುವುದರಿಂದ, ಇದು ಅತೀ ಕನಿಷ್ಟ ಮೊತ್ತವಾಗಿದ್ದು, ಈಗಾಗಲೇ 4 ವರ್ಷಗಳಾಗಿರುವುದರಿಂದ ಮತ್ತು ವಕೀಲರ ಕಾರ್ಯಕ್ಷಮತೆ / ದಕ್ಷತೆಯನ್ನು ಹೆಚ್ಚಿಸುವ ದೃಷ್ಟಿಯಿಂದ ಸದರಿ ಮೊತ್ತವನ್ನು ಬೆರಳಚ್ಚು ವೆಚ್ಚ ಸೇರಿದಂತೆ ಪ್ರತಿ ಪ್ರಕರಣಕ್ಕೆ ರೂ.1,000/-ಗಳಂತೆ ಗೌರವಧನವನ್ನು ಪರಿಷ್ಕರಿಸಿ ಆದೇಶ ಹೊರಡಿಸುವಂತೆ ಮತ್ತೊಮ್ಮೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿದ ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಲಾ-ಎಲ್‌ಎಡಿ/29/2019,**
**ಬೆಂಗಳೂರು, ದಿನಾಂಕ: 04.12.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಅದರ ವ್ಯಾಪ್ತಿಯಲ್ಲಿನ ಕಾನೂನು ಸೇವೆಗಳ ಸಮಿತಿಗಳಿಗೆ ಕಾನೂನು ನೆರವು ಕೋರಿ ಬರುವ ಪ್ರಕರಣಗಳಿಗೆ ಲಿಖಿತ ಅಭಿಪ್ರಾಯ ನೀಡಲು ಪ್ರಸ್ತುತ ವಕೀಲರುಗಳಿಗೆ ನೀಡಲಾಗುತ್ತಿರುವ ಸಂಭಾವನೆಯನ್ನು ರೂ. 600/-ರಿಂದ ರೂ.1,000/-ಗಳಿಗೆ ಭವಿಷ್ಯವರ್ತಿಯಾಗಿ ಪರಿಷ್ಕರಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ. ಈ ಪರಿಷ್ಕರಣೆಯಿಂದ ಉಂಟಾಗುವ ವೆಚ್ಚವನ್ನು ಸದರಿ ಪ್ರಾಧಿಕಾರಕ್ಕೆ ಒದಗಿಸುವ ಅನುದಾನದಿಂದಲೇ ಭರಿಸುವಂತೆ ತಿಳಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 92 ವೆಚ್ಚ-10/2021(e), ದಿನಾಂಕ: 28.07.2021ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

04/12/21

**(ಆದಿನಾರಾಯಣ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾನೂನು ಇಲಾಖೆ (ಆಡಳಿತ-2)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ ಪಿಬಿ ನಂ 5398, ಬೆಂಗಳೂರು-560 001.
2. ಮಹಾಲೇಖಪಾಲರು (ಇ & ಆರ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, ಪಿಬಿ ನಂ 5398, ಬೆಂಗಳೂರು-560 001.

....3

3. ಮಹಾಲೇಖಾಲರು (ಎ&ಈ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಪಿಬಿ ನಂ 5398 ಬೆಂಗಳೂರು-560 001.
4. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಸಿದ್ದಯ್ಯ ರಸ್ತೆ, ಬೆಂಗಳೂರು 560 027.
5. ಸರ್ಕಾರದ ಕಾರ್ಯದರ್ಶಿ (ಆ, ಮತ್ತು ಸಂ), ಆರ್ಥಿಕ ಇಲಾಖೆ. ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ವಿಶೇಷ ಕಾರ್ಯದರ್ಶಿ, ಕಾನೂನು ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-2 ಮತ್ತು 10), ವಿಧಾನ ಸೌಧ, ಬೆಂಗಳೂರು.
9. ಆಂತರಿಕ ಆರ್ಥಿಕ ಸಲಹೆಗಾರರು, ವಸತಿ ಕಾನೂನು ಮತ್ತು ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ, ಕಾನೂನು ಇಲಾಖೆ (ಆಡಳಿತ-2)ರವರ ಆಪ್ತ ಸಹಾಯಕರು, ವಿಧಾನ ಸೌಧ, ಬೆಂಗಳೂರು
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.